ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 09ನೇ ಮಾರ್ಚ್, 2020

ಕಾಡುಪ್ರಾಣಿ ಮತ್ತು ಮಾನವನ ನಡುವೆ ಸಂಘರ್ಷ ಕುರಿತು

ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು)

448 (546) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಆನೆಗಳ ದಾಳಿ ನಡೆಯುತ್ತಿರುತ್ತದೆ ;

(ಆ) ಕಳೆದ 3 ವರ್ಷಗಳಲ್ಲಿ ಆನೆಗಳ ಹಾವಳಿಯಿಂದ ಮೃತಪಟ್ಟವರ ಸಂಖ್ಯೆ ಎಷ್ಟು ; ಅವರಿಗೆ ನೀಡಿರುವ ಪರಿಹಾರ ಧನ ಎಷ್ಟು ; ಆಗಿರುವ ಬೆಳೆ ನಷ್ಟ ಎಷ್ಟು ; ಬೆಳೆ ನಷ್ಟ ಉಂಟಾದ ರೈತರಿಗೆ ಪರಿಹಾರ ನೀಡಲಾಗಿದೆ ;

(ಇ) ಕಾಡುಪ್ರಾಣಿ ಮತ್ತು ಮಾನವನ ಮಧ್ಯೆ ಉಂಟಾಗುವ ಸಂಘರ್ಷಗಳನ್ನು ತಪ್ಪಿಸಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಯೋಜನೆಗಳೇನು ; ಇವುಗಳನ್ನು ಎಷ್ಟರ ಮಟ್ಟಿಗೆ ಅನುಷ್ಠಾನಗೊಳಿಸಲಾಗಿದೆ ? (ವಿವರ ನೀಡುವುದು)